## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಸದಸ್ಯರ ಹೆಸರು** | : | **ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **218** |
| **ಉತ್ತರಿಸಬೇಕಾದ ದಿನಾಂಕ** | : | **14.02.2024** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು.** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಂಜೂರಾಗಿರುವ ಒಟ್ಟು ಪಶುವೈದ್ಯಾಧಿಕಾರಿಗಳ ಹುದ್ದೆಗಳೆಷ್ಟು; | ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಒಟ್ಟು 3317 ಪಶುವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿರುತ್ತವೆ. |
| ಆ) | ಇದರಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; | ಇದರಲ್ಲಿ ಒಟ್ಟು 1373 ಹುದ್ದೆಗಳು ಖಾಲಿ ಇರುತ್ತವೆ. |
| ಇ) | ಈ ಹುದ್ದೆಗಳು ಯಾವ ಅವಧಿಯಿಂದ ಖಾಲಿ ಇರುತ್ತದೆ; | 2014ನೇ ಸಾಲಿನಿಂದ ಪಶುವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುತ್ತವೆ. |
| ಈ) | ಈ ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | 400 ಪಶುವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮೋದನೆ ನೀಡಿರುತ್ತದೆ. ವಿಶೇಷ ನೇರ ನೇಮಕಾತಿ ನಿಯಮದಡಿ ದಿನಾಂಕ:08-03-2022 ರಂದು ನೇಮಕಾತಿ ಸಂಬಂಧ ಅಧಿಸೂಚನೆ ಹೊರಡಿಸಲಾಗಿತ್ತು.<br><br>ಪಶುವೈದ್ಯಾಧಿಕಾರಿಗಳ ನೇಮಕಾತಿ ಪ್ರಕ್ರಿಯೆಯಂತೆ ಅರ್ಹತಾಪಟ್ಟಿ ತಯಾರಿಸಲಾಗಿತ್ತು ಈ ನೇಮಕಾತಿ ಕುರಿತಂತೆ ಪಶುವೈದ್ಯಕೀಯ ಪದವೀಧರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 6662/2022 ರಂತೆ ದಾವೆಯನ್ನು ಹೂಡಿದ್ದು, ಉಚ್ಚ ನ್ಯಾಯಾಲಯವು ಈ ಪ್ರಕರಣವನ್ನು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಗೆ ವರ್ಗಾಯಿಸಿದ್ದರ ಹಿನ್ನೆಲೆಯಲ್ಲಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯು ವಿಶೇಷ ನೇರ ನೇಮಕಾತಿ ನಿಯಮವನ್ನು ದಿನಾಂಕ:25-02-2022 ರಂದು ವಜಾಗೊಳಿಸಿರುತ್ತದೆ. ಈ ಮಧ್ಯೆ ಪಶುವೈದ್ಯಕೀಯ ಪದವೀಧರರು ನೇಮಕಾತಿ ನಿಯಮ ವಜಾಗೊಳಿಸಿರುವುದನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:16408/2023 ರಂತೆ ದಾವೆಯನ್ನು ಹೂಡಿರುತ್ತಾರೆ. ಪ್ರಸ್ತುತ ಪ್ರಕರಣವು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಬಾಕಿ ಇದ್ದು ಅಂತಿಮ ತೀರ್ಮಾನ ಬಂದ ನಂತರ ಮುಂದಿನ ಕ್ರಮವಹಿಸಲಾಗುವುದು. |

**ಇ-ಪಸಂಮೀ 14 ಪಸಸೇ 2024**

**(ಕೆ.ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು